## ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಕಛೇರಿಯ ನಡವಳಿಗಳು

ವಿಷಯ: ಶ್ರೀ ಕೊರಗಿ ರುದ್ರಪ್ರಸಾದ್, ಉಪನ್ಯಾಸಕರು, ಶ್ರೀಮತಿ ಎಲ್.ವಿ.ಪಾಲಿಟೆಕ್ನಿಕ್, ಹಾಸನ (ಹಾಲಿ ಸರ್ಕಾರಿ ಪಾಲಿಟೆಕ್ನಿಕ್, ಬಾಗೇಪಲ್ಲಿಯಲ್ಲಿ ಕಾರ್ಯನಿರ್ವಹಿಸುತ್ತಿರುವ) ಇವರು ವಿದ್ಯಾರ್ಥಿ ನಿಲಯದ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದರಿಂದ ಸರ್ಕಾರಿ ಸೇವೆಯಿಂದ ವಜಾಗೊಳಿಸುವ ಬಗ್ಗೆ

ಓದಲಾದ:
1. ಈ ಕಛೇರಿಯ ಕಾರಣ ಕೇಳುವ ನೋಟಿಸ್ ದಿ: 14.09.2004
2. ನಿವೃತ್ತ ಜಿಲ್ಲಾ ನ್ಯಾಯಾಧೀಶರ ವಿಚಾರಣಾ ಅಂತಿಮ ವರದಿ ದಿ: 28.9.2012
3. ಎರಡನೇ ಕಾರಣ ಕೇಳುವ ನೋಟಿಸು ಸಂ: ಡಿಟಿಇ 89 ಎಂಎಸ್‌ಸಿ 96 ಡಿಇಕ್ಯೂ(1) ವಾಲ್ಯೂಂ-2, ದಿನಾಂಕ: 03.04.2012
4. ಈ ಕಛೇರಿ ಪತ್ರ ಸಂ: ಡಿಟಿಇ 89 ಎಂಎಸ್‌ಸಿ 96 ಡಿಇಕ್ಯೂ(1) ವಾಲ್ಯೂಂ(2) 2410/5362, ದಿನಾಂಕ: 14.02.2013.
5. ಸರ್ಕಾರದ ಪತ್ರ ಸಂ: ಇಡಿ 43 ಡಿಟಿಇ 2012, ದಿ: 29.10.2014

*********

**ಪ್ರಸ್ತಾವನೆ;**

ಓದಲಾದ (1) ರಿಂದ (3)ರಲ್ಲಿನ ಪತ್ರದಲ್ಲಿ ಶ್ರೀ ಕೊರಗಿ ರುದ್ರಪ್ರಸಾದ್, ಉಪನ್ಯಾಸಕರು, ಸರ್ಕಾರಿ ಶ್ರೀಮತಿ ಎಲ್.ವಿ. ಪಾಲಿಟೆಕ್ನಿಕ್, ಹಾಸನ ಇಲ್ಲಿನ ವಿದ್ಯಾರ್ಥಿನಿಲಯದಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಹಣ ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ಶ್ರೀ ರಾಜು, ಪೂರ್ವಭಾವಿ ವಿಚಾರಣಾಧಿಕಾರಿಗಳು ಮತ್ತು ವಿಷಯ ಪರಿವೀಕ್ಷಕರು, ದಿನಾಂಕ: 17.07.2004 ರಂದು ವರದಿ ಸಲ್ಲಿಸಿದ್ದರು. ಈ ವರದಿಯನ್ನು ಆಧರಿಸಿ ದಿನಾಂಕ: 14.09.2004 ರಂದು ಸದರಿಯವರಿಗೆ ದೋಷಾರೋಪಣಾ ಪಟ್ಟಿ ಜಾರಿ ಮಾಡಿ ವಿವರಣೆ ಕೇಳಲಾಗಿತ್ತು. ಸದರಿ ದೋಷಾರೋಪಣಾ ಪಟ್ಟಿಗೆ ಸಲ್ಲಿಸಲಾದ ಲಿಖಿತ ಸಮಜಾಯಿಷಿಯನ್ನು ಒಪ್ಪದ ಶಿಸ್ತು ಪ್ರಾಧಿಕಾರವು ಪೂರ್ಣಾವಧಿ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ದಿನಾಂಕ: 26.04.2011 ರಲ್ಲಿ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎ.ಕೃಷ್ಣಪ್ಪ ಇವರನ್ನು ವಿಚಾರಣಾಧಿಕಾರಿಗಳಾಗಿ ನೇಮಿಸಲಾಗಿತ್ತು. ಸದರಿ ವಿಚಾರಣಾಧಿಕಾರಿಗಳು ಪ್ರಕರಣದ ಬಗ್ಗೆ ವಿಚಾರಣ ನಡೆಸಿ ವಿಚಾರಣಾ ಅಂತಿಮ ವರದಿಯನ್ನು ದಿನಾಂಕ: 28.09.2011 ರಂದು ಕಛೇರಿಗೆ ಸಲ್ಲಿಸಿರುತ್ತಾರೆ. ಸದರಿ ವಿಚಾರಣಾ ವರದಿಯನ್ನು ಹಾಗೂ ಅಡಕಗಳನ್ನು ಅವಲೋಕಿಸಿದಾಗ ಶ್ರೀ ಕೊರಗಿ ರುದ್ರಪ್ರಸಾದ್ ಇವರು ವಿದ್ಯಾರ್ಥಿಗಳಿಂದ ವಸೂಲಿಯಾದ ಹಾಗೂ ವಿದ್ಯಾರ್ಥಿಗಳಿಗೆ ವಾಪಸ್ ಹಿಂದಿರುಗಿಸಬಹುದಾದ ಹಣವನ್ನು ಹಿಂದಿರುಗಿಸದೇ ದುರುಪಯೋಗ ಪಡಿಸಿಕೊಂಡಿದ್ದಾರೆಂದು ವರದಿಯಲ್ಲಿ ತಿಳಿಸಿರುತ್ತಾರೆ. ಉಲ್ಲೇಖ(3)ರಲ್ಲಿ ಓದಲಾದ, ಸದರಿ ವರದಿಯನ್ನು ಲಗತ್ತಿಸಿ ಎರಡನೇ ಕಾರಣ ಕೇಳುವ ನೋಟಿಸಿನ ಮೂಲಕ ಆಪಾದಿತರಿಗೆ ಜಾರಿ ಮಾಡಿ ಅವರ ಲಿಖಿತ ರಕ್ಷಣಾತ್ಮಕ ಹೇಳಿಕೆಯನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಲಾಗಿತ್ತು. ಅದಕ್ಕೆ ಪ್ರತ್ಯುತ್ತರವಾಗಿ ದಿನಾಂಕ: 05.05.2012 ರಂದು ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯನ್ನು ಪರಿಶೀಲಿಸಿ ಪರಿಗಣಿಸಲು ಸೂಕ್ತವಾದ ಅಂಶಗಳು ಇಲ್ಲದ ಹಿನ್ನೆಲೆಯಲ್ಲಿ ಶಿಸ್ತು ಪ್ರಾಧಿಕಾರವು ಸದರಿಯವರ ವಿರುದ್ಧ ನಡೆಸಲಾದ ವಿಚಾರಣಾ ವರದಿಯನ್ವಯ ವಿಚಾರಣಾ ವರದಿಯನ್ನು ಅಂಗೀಕರಿಸಿ ಸದರಿಯವರಿಗೆ ಸರ್ಕಾರದ ಹಂತದಲ್ಲಿಯೇ ಸೂಕ್ತ ಕಠಿಣ ದಂಡನೆಯನ್ನು ವಿಧಿಸಬಹುದೆಂಬ ಅಭಿಪ್ರಾಯದೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಲಾಗಿತ್ತು. ಸದರಿಯವರನ್ನು ಸೇವೆಯಿಂದ ವಜಾಗೊಳಿಸುವ ದಂಡನೆಯನ್ನು ವಿಧಿಸಲು ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 16.12.2013ರ ಪತ್ರದಲ್ಲಿ ಸಹಮತಿ ನೀಡಿರುತ್ತದೆ. ಮತ್ತು ಸದರಿ ದಂಡನೆಗೆ 26.09.2014 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಅನುಮೋದನೆಯನ್ನೂ ಸಹ ಪಡೆಯಲಾಗಿರುತ್ತದೆ. ಆದ್ದರಿಂದ ಶ್ರೀ ಕೊರಗಿ ರುದ್ರಪ್ರಸಾದ್ ಇವರು ಉಪನ್ಯಾಸಕರಾಗಿದ್ದು ಉಪನ್ಯಾಸಕರ ವೃಂದಕ್ಕೆ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಇವರು ನೇಮಕಾತಿ ಹಾಗೂ ಶಿಸ್ತು ಪ್ರಾಧಿಕಾರವಾಗಿರುವುದರಿಂದ ಶ್ರೀ ಕೊರಗಿ ರುದ್ರಪ್ರಸಾದ್, ಉಪನ್ಯಾಸಕರು, ಸರ್ಕಾರಿ ಶ್ರೀಮತಿ ಎಲ್.ವಿ. ಪಾಲಿಟೆಕ್ನಿಕ್, ಹಾಸನ ಇವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii) ರ ಅನ್ವಯ ಕೂಡಲೇ ಸೇವೆಯಿಂದ ವಜಾಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಉಲ್ಲೇಖ(5)ರ ಓದಲಾದ ಪತ್ರದಲ್ಲಿ ಸರ್ಕಾರವು ತಿಳಿಸಿರುತ್ತದೆ. ಆದ್ದರಿಂದ ಈ ಕೆಳಕಂಡಂತೆ ಆದೇಶ.

..........2

**ಆದೇಶ**

**ಸಂಖ್ಯೆ: ಡಿಟಿಇ 89 ಎಂಎಸ್‌ಸಿ 96 ಡಿಇಕ್ಯೂ(1) ವಾಲ್ಯೂಂ-2, 12664 ದಿನಾಂಕ: 14-11-2014**

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ ಶ್ರೀ ಕೊರಗಿ ರುದ್ರಪ್ರಸಾದ್, ಉಪನ್ಯಾಸಕರು, ಸರ್ಕಾರಿ ಎಲ್.ವ್ಹಿ ಪಾಲಿಟೆಕ್ನಿಕ್, ಹಾಸನ (ಹಾಲಿ ಸರ್ಕಾರಿ ಪಾಲಿಟೆಕ್ನಿಕ್, ಬಾಗೇಪಲ್ಲಿ) ಇವರು 1996-97ನೇ ಅವಧಿಯಲ್ಲಿ ವಿದ್ಯಾರ್ಥಿ ನಿಲಯದ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದು ಸಾಬೀತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ) ನಿಯಂತ್ರಣ ಮತ್ತು ಮೇಲ್ಮನವಿ ನಿಯಮಗಳು 1957ರ ನಿಯಮ 8(viii) ರ ಪ್ರಕಾರ ತಕ್ಷಣದಿಂದ ಜಾರಿಗೆ ಬರುವಂತೆ **ಸರ್ಕಾರಿ ಸೇವೆಯಿಂದ ವಜಾಗೊಳಿಸಲಾಗಿದೆ.**

ನಿರ್ದೇಶಕರು
ಹಾಗೂ ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರ
ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

ಇವರಿಗೆ,

1. ಶ್ರೀ ಕೊರಗಿ ರುದ್ರಪ್ರಸಾದ್, ಉಪನ್ಯಾಸಕರು, ಸರ್ಕಾರಿ ಪಾಲಿಟೆಕ್ನಿಕ್, ಬಾಗೇಪಲ್ಲಿ (ಪ್ರಿನ್ಸಿಪಾಲರ ಮುಖಾಂತರ)
2. ಪ್ರಾಚಾರ್ಯರು, ಸರ್ಕಾರಿ ಪಾಲಿಟೆಕ್ನಿಕ್, ಬಾಗೇಪಲ್ಲಿ- ಸದರಿಯವರನ್ನು ಸರ್ಕಾರಿ ಸೇವೆಯಿಂದ ಕೂಡಲೇ ಕಾರ್ಯವಿಮುಕ್ತಿಗೊಳಿಸಿ ವರದಿಯನ್ನು ಈ ಕಛೇರಿಗೆ ಕಳುಹಿಸುವುದು.
3. ಪ್ರಾಚಾರ್ಯರು, ಶ್ರೀಮತಿ ಎಲ್.ವಿ. ಸರ್ಕಾರಿ ಪಾಲಿಟೆಕ್ನಿಕ್, ಹಾಸನ- ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ
4. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸ ಸೌಧ ಬೆಂಗಳೂರು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 10 ಪ್ರತಿಗಳನ್ನು ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುವುದು.

ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ, ಬೆಂಗಳೂರು.
2. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
3. ಮಾಧ್ಯಮ ಸಲಹೆಗಾರರು, ಮಾನ್ಯ ಮುಖ್ಯಮಂತ್ರಿಯವರ ಕಾರ್ಯಾಲಯ, ವಿಕಾಸಸೌಧ, ಬೆಂಗಳೂರು.
4. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
5. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ (ಕೆಜಿಐಡಿ), ಬೆಂಗಳೂರು
8. ಸಹಾಯಕ ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ (ಕೆಜಿಐಡಿ), ಚಿಕ್ಕಬಳ್ಳಾಪುರ
9. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
10. ಕಾರ್ಯದರ್ಶಿಗಳು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
11. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
12. ನಿರ್ದೇಶನಾಲಯದ ಆಪ್ತ ಶಾಖೆ.
13. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
14. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಸದರಿ ಆದೇಶವನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.
15. ಇಎಸ್‌ಟಿ(1)ಎ, ಇಎಸ್‌ಟಿ8(ಬಿ),ಇಎಸ್‌ಟಿ(7), ಇಎಸ್‌ಟಿ(9) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.